ದಿನಾಂಕ 11-06-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎಸ್.ಆರ್.ಹೆಚ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಹಾವಣಗಿ ಗ್ರಾಮದ ಸ ನಂ: 63/1 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ದಿ: 21-02-2002 ರ ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು ಮತ್ತು ಪಿ.ಟಿ ಶೀಟಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀ ಎಸ್.ಎಂ.ಕೆ ವಕೀಲರಿಂದ ಃ**

ಶ್ರೀ ಎಂ.ಎಂ.ಕೆ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಪ್ರತಿವಾದ ಪತ್ರವನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಪಾಟೀ ಸವಾಲನ್ನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ

ಹಾನಗಲ್

ಸಾಕ್ಷಿದಾರರ ಸಹಿ